## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಶ್ರೀಕಾಂತ ತವಣಪ್ಪ ಕಾಮಗೌಡ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ನಿಪನಾಳ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ಶಿಫಾರಸ್ಸಿನನ್ವಯ ಕ್ರಮವಹಿಸುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 713 ಗ್ರಾಪಂಕಾ 2016, ದಿನಾಂಕ 16.12.2016
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರ ಸಂಖ್ಯೆ: ಉಪಲೋಕ್-1/ಡಿಇ/311/2017/ಎಆರ್ಇ-10, ದಿನಾಂಕ 12.07.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ, ಶ್ರೀ ಶ್ರೀಕಾಂತ ತವಣಪ್ಪ ಕಾಮಗೌಡ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ನಿಪನಾಳ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ 2008-09 ರಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಅವ್ಯವಹಾರ ಎಸಗಿರುವ ಸಂಬಂಧ ಶ್ರೀ ಕಾಶಿಮಸಾಬ ಶಿರಾಜಸಾಬದ್ ನದಾಫ್, ನಿಪನಾಳ ಗ್ರಾಮ ಇವರು ಲೋಕಾಯುಕ್ತ ಸಂಸ್ಥೆಗೆ ಸಲ್ಲಿಸಿದ ದೂರಿನನ್ವಯ ದಿನಾಂಕ 02.11.2016 ರ ಸರ್ಕಾರದ ಆದೇಶದಲ್ಲಿ ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿ ಆದೇಶಿಸಲಾಗಿತ್ತು.

ಲೋಕಾಯುಕ್ತ ಸಂಸ್ಥೆಯು ಪ್ರಕರಣದ ಸಂಬಂಧ ಕೆಳಕಂಡ ಆರೋಪಗಳ ಬಗ್ಗೆ ಸದರಿ ನೌಕರರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಅಪರ ನಿಬಂಧಕರು ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರಿಗೆ ವಹಿಸಲಾಗಿತ್ತು.

> "ಶ್ರೀ ಶ್ರೀಕಾಂತ ತವಣಪ್ಪ ಕಾಮಗೌಡ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ನಿಪನಾಳ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರು ನಿಪನಾಳ ಗ್ರಾಮ ಪಂಚಾಯತಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ 2008-09 ರಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಮಂಜೂರಾದ ಅನುದಾನವನ್ನು ದುರುಪಯೋಗಪಡಿಸಿಕೊಂಡಿದ್ದು, ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಕೂಲಿಕಾರರನ್ನು ಬಳಸದೆ ಯಂತ್ರಗಳನ್ನು ಬಳಸಿರುವುದು ಕಂಡುಬಂದಿರುವುದರಿಂದ ಎದುರುದಾರರು ಸರ್ಕಾರಿ ನೌಕರರಾಗಿ ಕರ್ತವ್ಯಲೋಪ ಎಸಗಿರುವುದು ಮೇಲೋಟಕ್ಕೆ ಕಂಡು ಬಂದಿರುವ ಹಿನ್ನೆಲೆಯಲ್ಲಿ ಕರ್ನಾಟಕ ನಾಗರೀಕ ಸೇವೆ(ನಡತೆ) ನಿಯಮ 1966 ರ ನಿಯಮಗಳು 3(1) ರನ್ವಯ ಎದುರುದಾರರು ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆ."

ಮೇಲೆ ಓದಲಾದ (2) ರಲ್ಲಿ, ವಿಚಾರಣಾ ವರದಿಯನ್ವಯ ಶ್ರೀ ಶ್ರೀಕಾಂತ ತವಣಪ್ಪ ಕಾಮಗೌಡ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ನಿಪನಾಳ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರು ದಿನಾಂಕ 26.06.2016 ರಂದು ಮರಣ ಹೊಂದಿರುವುದರಿಂದ ಸದರಿಯವರ ವಿರುದ್ಧ ಶಿಸ್ತುನಡವಳಿಕೆಗಳನ್ನು ಕೈಬಿಡಲು ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪರಿಶೀಲಿಸಿ, ಆರೋಪಿತ ನೌಕರರು ದಿನಾಂಕ 26.06.2016 ರಂದು ಮರಣ ಹೊಂದಿರುವುದರಿಂದ ಸದರಿಯವರ ವಿರುದ್ಧ ಶಿಸ್ತು ನಡವಳಿಕೆಗಳನ್ನು ಮುಕ್ತಾಯಗೊಳಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 713 ಗ್ರಾಪಂಕಾ 2016(ಭಾಗ-1), ಬೆಂಗಳೂರು, ದಿನಾಂಕ: 24.10.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಶ್ರೀಕಾಂತ ತವಣಪ್ಪ ಕಾಮಗೌಡ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ನಿಪನಾಳ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರು ದಿನಾಂಕ 26.06.2016 ರಂದು ಮರಣ ಹೊಂದಿರುವುದರಿಂದ, ಮಾನ್ಯ ಉಪಲೋಕಾಯುಕ್ತ-1 ರವರ ಶಿಫಾರಸ್ಸಿನನ್ವಯ ಲೋಕಾಯುಕ್ತ ಪ್ರಕರಣ ಸಂಬಂಧ ಸದರಿಯವರ ವಿರುದ್ಧದ ಶಿಸ್ತು ನಡವಳಿಕೆಗಳನ್ನು ಮುಕ್ತಾಯಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಮುಬಾರಕ್ ಅಹ್ಮದ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ-1 ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ.
5) ಕಾರ್ಯನಿರ್ವಾಹಕ ಅಧಿಕಾರಿ, ರಾಯಭಾಗ ತಾಲ್ಲೂಕು ಪಂಚಾಯತಿ, ರಾಯಭಾಗ, ಬೆಳಗಾವಿ ಜಿಲ್ಲೆ.
6) ಗಣಕಕೋಶ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ. – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.